159೨೮ ಅ
(45)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಎಸ್. ಹೊರಟ್ಟಿ ಇವರ ನಿಯಮ 72ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ:**

ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿಧನ, ನಿವೃತ್ತಿ, ಬಡ್ತಿ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದ ಬೋಧಕ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಎಸ್‌ಇಎಸ್ 2021, ದಿನಾಂಕ: 07.08.2024ರ ಪ್ರಕಾರ ಅನುಮತಿ ನೀಡಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕಾತಿ ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸುವುದರೊಂದಿಗೆ ನೇಮಕಾತಿ ಅನುಮೋದನೆಯ ಪ್ರಾಧಿಕಾರವನ್ನು ಈ ಹಿಂದಿನಂತೆ ಆಯಾ ಆಯುಕ್ತಾಲಯಗಳಿಗೆ ನೀಡಿ, ಸರ್ಕಾರದ ಹಂತದಲ್ಲಿ ಸೂಕ್ತ ಆದೇಶ ಹೊರಡಿಸಲು ಈ ಮೂಲಕ ಒತ್ತಾಯಿಸುತ್ತೇನೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಎಸ್‌ಇಎಸ್ 2021, ದಿನಾಂಕ: 07.08.2024ರಲ್ಲಿ, 1994-95 ರ ಶೈಕ್ಷಣಿಕ ಅವಧಿಗೆ ಪೂರ್ವದಲ್ಲಿ ಪ್ರಾರಂಭಗೊಂಡು ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಖಾಸಗಿ ಅನುದಾನಿತ ಪ್ರೌಢಶಾಲೆಗಳು, ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ ದಿನಾಂಕ:31.12.2020 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಮತ್ತಿತರ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಹಲವು ಷರತ್ತಿಗಳಿಗೊಳಪಟ್ಟು ಭರ್ತಿ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 01-01-2016 ರಿಂದ 31-12-2020ರ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಈಗಾಗಲೇ ತಂತ್ರಾಂಶವನ್ನು ಸಿದ್ಧಪಡಿಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಬಿ.ಇ.ಓ ಹಂತ (ಮೊದಲನೇ ಹಂತ) ಮುಗಿದಿರುತ್ತದೆ ಹಾಗೂ ಶಾಲಾ ಆಡಳಿತ ಮಂಡಳಿಯವರ ಇಂಧೀಕರಣ ಕಾರ್ಯ (ಎರಡನೇ ಹಂತ) ಚಾಲ್ತಿಯಲ್ಲಿರುತ್ತದೆ.

ದಿನಾಂಕ: 08.05.2026ರಂದು ಸಮಾಜ ಕಲ್ಯಾಣ ಇಲಾಖೆಯು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 515 ಪಕವಿ 2026ರಂತೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾದ ರಿಕ್ತ ಸ್ಥಾನಗಳಿಗೆ ಅನುರಿಸಬೇಕಾದ 400 ಬಿಂದುಗಳ ರೋಸ್ಟರಂತೆ ವಿವಿಧ ನೇಮಕಾತಿ / ಆಯ್ಕೆ ಪ್ರಾಧಿಕಾರಗಳು ನೇರ ನೇಮಕಾತಿ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಸಿಆಸು ಇಲಾಖೆಯು ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026ರಲ್ಲಿ ತಿಳಿಸಿದ್ದು, ಅದರನ್ವಯ ಕ್ರಮವಹಿಸುವಂತೆ ಎಲ್ಲಾ ನೇಮಕಾತಿ / ಆಯ್ಕೆ ಪ್ರಾಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಸೂಚಿಸಿರುವ ಕ್ರಮಗಳನ್ವಯ ತಂತ್ರಾಂಶವನ್ನು ಮಾರ್ಪಡಿಸಲು ಆಯುಕ್ತಾಲಯದಿಂದ ಕ್ರಮವಹಿಸುತ್ತಿದ್ದು ಈ ಆದೇಶದಲ್ಲಿ ಸೂಚಿಸಿರುವ ಕ್ರಮಗಳನ್ವಯ ತಂತ್ರಾಂಶವನ್ನು ಮಾರ್ಪಡಿಸುವುದರೊಂದಿಗೆ ಸದರಿ ಪ್ರಸ್ತಾವನೆಗಳನ್ನು ತಂತ್ರಾಂಶದ ಮೂಲಕ ಸಹ ನಿರ್ದೇಶಕರನ್ನೊಗೊಂಡ ಸಮಿತಿಗೆ ಸಲ್ಲಿಸಲು ಆಯುಕ್ತಾಲಯವು ಕ್ರಮವಹಿಸುತ್ತಿದೆ.

ಮುಂದುವರೆದು, ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಇಪಿ 396 ಟಿಪಿಯು 2021, ದಿನಾಂಕ: 07.08.2024 ರನ್ವಯ ದಿನಾಂಕ: 01.01.2016 ರಿಂದ ದಿನಾಂಕ: 31.12.2020 ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತಿಗೆ ಒಳಪಟ್ಟು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. ಸದರಿ ಆದೇಶದ ಪ್ರಕಾರ ಹುದ್ದೆಗಳನ್ನು ಭರ್ತಿ ಪ್ರಕ್ರಿಯೆಯನ್ನು ಆನ್-ಲೈನ್‌ನಲ್ಲಿ ಮಾಡಲು ಆದೇಶಿಸಿದ್ದು, ಅದರ ಪ್ರಕಾರ ಖಾಲಿ ಹುದ್ದೆಗಳ ಮಾಹಿತಿಯನ್ನು ಕಾಲೇಜುಗಳಿಂದ ಹಾಗೂ ಜಿಲ್ಲಾ ಉಪನಿರ್ದೇಶಕರಿಂದ ಪರಿಶೀಲಿಸುವ ಕಾರ್ಯ ಪ್ರಗತಿಯಲ್ಲಿದೆ ಹಾಗೂ ಹುದ್ದೆ ಭರ್ತಿಗೆ ಅನುಮತಿ ನೀಡುವ ಪ್ರಕ್ರಿಯೆಗೆ ಆನ್-ಲೈನ್‌ನಲ್ಲಿ ಪ್ರಸ್ತಾವನೆಯನ್ನು ಇಂದಿಕರಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

ಹುದ್ದೆಗಳ ಪಾರದರ್ಶಕತೆ, ನೇಮಕಾತಿ ಅನುಮೋದನೆಗಾಗಿ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 384 ವೆಚ್ಚ-8/2013, ದಿನಾಂಕ; 09.04.2013ರಲ್ಲಿನ ಚೆಕ್‌ಲಿಸ್ಟ್ ಅನುಬಂಧ-3ರನ್ವಯ ಸಂಪೂರ್ಣ ಮಾಹಿತಿ/ದಾಖಲೆಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅನುಮತಿ ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ನೇಮಕಾತಿ ಅನುಮೋದನೆ ಪ್ರಾಧಿಕಾರವನ್ನು ನಿರ್ಣಯಿಸುವ ಕುರಿತು ಆರ್ಥಿಕ ಇಲಾಖೆಯೊಂದಿಗೆ ಆಯುಕ್ತರಿಗೆ ಪ್ರತಿನಿಯೋಜಿಸುವ ಬಗ್ಗೆ ಸಮಾಲೋಚಿಸಲಾಗುವುದು.

ಸಂಖ್ಯೆ: ಇಪಿ 265 ಎಸ್‌ಇಎಸ್ 2026

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು